ವಿಷಯ: ಸಮಾಜ ವಿಜ್ಞಾನ **ರೂಪಣಾತ್ಮಕ ಪರೀಕ್ಷೆ ೪** ಅಂಕಗಳು : ೨೦

ತರಗತಿ: ೧೦ನೇ **KEY ANSWER** ಸಮಯ: ೪೦ ನಿಮಿಷಗಳು

**I. ಕೆಳಗಿನ ಪ್ರಶ್ನೆಗಳಿಗೆ ಒಂದು ವಾಕ್ಯದಲ್ಲಿ ಉತ್ತರಿಸಿ. 4x1=4**

1. ಬ್ರಹ್ಮ ಸಮಾಜವನ್ನು ಸ್ಥಾಪಿಸಿದವರು ರಾಜಾ ರಾಮಮೋಹನ್ ರಾಯರು.
2. ಭಾರತದ ಭೂಪ್ರದೇಶಕ್ಕೆ ಹೊಂದಿಕೊಂಡಿರುವ ದೊಡ್ಡ ನೆರೆಯ ರಾಷ್ಟ್ರ ಚೀನಾ.
3. ಪರ್ವತಗಳ ಅಥವಾ ಬೆಟ್ಟಗಳ ಮೇಲ್ಭಾಗದಿಂದ ಕಡಿದಾದ ಇಳಿಜಾರಿನಗುಂಟ ಕೆಳಕ್ಕೆ ಜಾರುವ ಭೂರಾಶಿಗೆ ಭೂ ಕುಸಿತಗಳೆನ್ನುವರು.
4. ಹಣಕಾಸು ಸಚಿವರು

**II. ಈ ಕೆಳಗಿನ ಪ್ರಶ್ನೆಗಳಿಗೆ ಎರಡು ಅಥವಾ ಮೂರು ವಾಕ್ಯಗಳಲ್ಲಿ ಉತ್ತರಿಸಿ. 3x2=6**

5. ಕೃಷಿ ಉದ್ದೇಶಕ್ಕೆ ಕೃತಕವಾಗಿ ನೀರು ಪೂರೈಕೆ ಮಾಡುವುದನ್ನು 'ನೀರಾವರಿ' ಎಂದು ಕರೆಯಲಾಗಿದೆ. ಭಾರತದಲ್ಲಿ ಬಾವಿ, ಕಾಲುವೆ ಮತ್ತು ಕೆರೆ ನೀರಾವರಿ ವಿಧಾನಗಳು ರೂಢಿಯಲ್ಲಿವೆ.

ಅಥವಾ

ಯಾವ ವಲಯವು ಸರ್ಕಾರದಲ್ಲಿ ನೋಂದಣಿಯಾಗಿ ಕಾನೂನಿನ ಚೌಕಟ್ಟಿನೊಳಗೆ, ದುಡಿಯುವ ಕಾರ್ಮಿಕರಿಗೆ ನಿಗದಿತ ಕೆಲಸ, ಉದ್ಯೋಗ ಭರವಸೆ, ನಿಗದಿತ ವೇತನವನ್ನು ಕಾನೂನಿನ ಚೌಕಟ್ಟಿನಲ್ಲಿಯೇ ನಿಗದಿಯಾಗಿರುತ್ತದೆಯೋ ಅದನ್ನು ಸಂಘಟಿತ ದುಡಿಮೆಯ ವಲಯವೆಂದು ಕರೆಯಲಾಗುತ್ತದೆ.

6. ಈ ಯುದ್ಧಕ್ಕೆ ನೇರ ಕಾರಣ ಯಾವುದೆಂದರೆ ತಿರುವಾಂಕೂರು ರಾಜಕಾರಣಕ್ಕೆ ಸಂಬಂಧಿಸಿದ ಪ್ರಶ್ನೆ. ಆ ರಾಜ್ಯದ ರಾಜ ನೆರೆಯ ಕೊಚ್ಚಿ ಸಂಸ್ಥಾನದಲ್ಲಿ ಬ್ರಿಟಿಷರ ಬೆಂಬಲದಿಂದ ಕೋಟೆಯನ್ನು ನಿರ್ಮಿಸಿದನು ಮತ್ತು ಆತನು ಡಚ್ಚರಿಂದ ಆಯಕೋಟಾ ಮತ್ತು ಕಾಂಗನೂರು ಕೋಟೆಗಳನ್ನು ಪಡೆದುಕೊಂಡಿದ್ದನು. ಇದು ಮಂಗಳೂರು ಒಪ್ಪಂದದ ಷರತ್ತುಗಳ ಉಲ್ಲಂಘನೆಯಾಗಿತ್ತು.

7. ಉತ್ಪಾದನೆಯನ್ನು ಗರಿಷ್ಟ ಮಟ್ಟಕ್ಕೆ ಹೆಚ್ಚಿಸುವುದು. ಉದ್ಯೋಗಾವಕಾಶಗಳನ್ನು ಹೆಚ್ಚಿಸುವುದು. ಆರ್ಥಿಕ ಅಸಮಾನತೆಗಳನ್ನು ಕಡಿಮೆ ಮಾಡುವುದು. ಆರ್ಥಿಕ ಸ್ಥಿರತೆಯನ್ನು ಕಾಯ್ದುಕೊಳ್ಳುವುದು.

ಅಥವಾ

ಜಗತ್ತಿನಲ್ಲಿ ಶ್ರೇಷ್ಠವಾದ ಜನಾಂಗವೆಂದರೆ ಆರ್ಯ ಜರ್ಮನ್ ಜನಾಂಗ. ಜಗತ್ತನ್ನು ಆಳ್ವಿಕೆ ಮಾಡಲು ಕೇವಲ ಜರ್ಮನ್ನರು ಮಾತ್ರ ಯೋಗ್ಯರು ಉಳಿದ ಜನಾಂಗಗಳು ಕೇವಲ ಆಳಿಸಿಕೊಳ್ಳಲು ಮಾತ್ರ ಯೋಗ್ಯರು. ಜರ್ಮನ್ನರ ಎಲ್ಲಾ ಸಮಸ್ಯೆಗಳಿಗೆ ಯೆಹೂದಿಗಳೇ ಕಾರಣ.

**III. ಈ ಕೆಳಗಿನ ಪ್ರಶ್ನೆಗಳಿಗೆ ಐದುಅಥವಾ ಆರುವಾಕ್ಯಗಳಲ್ಲಿ ಉತ್ತರಿಸಿ. 2x3=6**

8. ಅಂತರರಾಷ್ಟ್ರೀಯ ಶಾಂತಿ ಮತ್ತು ಸುಭದ್ರತೆಯನ್ನು ಕಾಪಾಡುವುದು. ರಾಷ್ಟ್ರಗಳ ಮಧ್ಯೆ ಪರಸ್ಪರ ಮೈತ್ರಿಯನ್ನು ಬೆಳೆಸುವುದು. ಮಾನವನ ಮೂಲಭೂತ ಹಕ್ಕುಗಳ ಬಗೆಗೆ ನಂಬುಗೆಯನ್ನು ಹೆಚ್ಚಿಸುವುದು. ಅಂತರರಾಷ್ಟ್ರೀಯ ಮಟ್ಟದ ಆರ್ಥಿಕ, ಸಾಮಾಜಿಕ, ಸಾಂಸ್ಕೃತಿಕ ಅಥವಾ ಮಾನವೀಯ ನೆಲೆಯ ಸಮಸ್ಯೆಗಳಿಗೆ ಅಂತರರಾಷ್ಟ್ರೀಯ ಸಹಕಾರದೊಂದಿಗೆ ಪರಿಹಾರ ಕಂಡು ಕೊಳ್ಳುವುದು.

9. ಉಷ್ಣವಲಯದ ಆವರ್ತಮಾರುತಗಳು ಬಹಳ ವಿನಾಶಕಾರಿಯಾದವು. ಅವು ಸಾವು ಮತ್ತು ಆಸ್ತಿಗಳಿಗೆ ಹಾನಿಯನ್ನುಂಟುಮಾಡುತ್ತವೆ. ಕಟ್ಟಡಗಳಿಗೆ ಧಕ್ಕೆ, ಸಾರಿಗೆ ಮತ್ತು ಸಂಪರ್ಕ ಮಾಧ್ಯಮಗಳನ್ನು ಅಸ್ತವ್ಯಸ್ತಗೊಳಿಸುತ್ತವೆ. ವಿದ್ಯುತ್ ಸರಬರಾಜಿಗೆ ಅಡಚಣೆ, ಬೆಳೆಗಳು, ಸ್ವಾಭಾವಿಕ ಸಸ್ಯವರ್ಗ, ಪ್ರಾಣಿ ಸಂಕುಲ ಮೊದಲಾದವುಗಳಿಗೂ ಹಾನಿಯನ್ನುಂಟುಮಾಡುವವು.

ಅಥವಾ

ಇಪ್ಪತ್ತನೆಯ ಶತಮಾನದಲ್ಲಿ ಸರ್ಕಾರದ ಪಾತ್ರಗಳ ವಿಸ್ತಾರವು ಅಧಿಕಗೊಂಡಿದ್ದರಿಂದ ಸಾರ್ವಜನಿಕ ವೆಚ್ಚವೂ ಏರಿಕೆಯಾಗಿದೆ. ಸಾರ್ವಜನಿಕ ವೆಚ್ಚವು ಆರ್ಥಿಕ ಅಭಿವೃದ್ಧಿಯನ್ನು ಪೋಷಿಸುವ ಸೌಕರ್ಯಗಳನ್ನು ಸೃಷ್ಟಿಸಿ ಹೊರೆಯಬೇಕಾಗುತ್ತದೆ. ಅದು ಬಂಡವಾಳ ಹೂಡಿಕೆಗೆ ಇರುವ ವಾತಾವರಣವನ್ನು ಸುಧಾರಿಸಬೇಕಾಗುತ್ತದೆ. ಉಳಿತಾಯ, ಹೂಡಿಕೆ ಮತ್ತು ಆವಿಷ್ಕಾರಗಳಿಗೆ ಉತ್ತೇಜಕಗಳನ್ನು ಒದಗಿಸಬೇಕಾಗುತ್ತದೆ.

**V. ಭಾರತದ ನಕ್ಷೆ ಬಿಡಿಸಿ ಭಾಗಗಳನ್ನು ಗುರುತಿಸಿ. 1x4=4**

10.




Downloaded from scoringtarget.com